ಕರ್ನಾಟಕ ಸರಕಾರ

ಸಂಖ್ಯೆ: ಹಿಂವಕಇ/ವಿನಿಡಿ/ಪಿ.ಎಚ್.ಡಿ./ಸಿಆರ್-01/2021-22

ಜಿಲ್ಲಾ ಅಧಿಕಾರಿಯವರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಆನೆಗುಂಡಿ ರೋಡ್, ಬಿಜೈ-ಕಾಪಿಕಾಡ್,
ಮಂಗಳೂರು, ದಿನಾಂಕ: 09-12-2021

Registrar,
NITK, NH 66,
Srinivasnagar, Surathkal,
Mangalore - 575025 -ಇವರಿಗೆ,

DC(Acd) / AR(Acd)
Supdt(Acd) / E4 / LO OBC

ಮಾನ್ಯರೆ,

**ವಿಷಯ:** 2021-22ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಎಚ್.ಡಿ. ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ನೀಡಲು ಅರ್ಹ ವಿದ್ಯಾರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಕುರಿತು.

**ಉಲ್ಲೇಖ:** ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು-ಇವರ ಕಛೇರಿ ಪತ್ರ ಸಂಖ್ಯೆ:ಹಿಂವಕಇ/ತರಬೇತಿ-1/ಪಿಹೆಚ್.ಡಿ/ಸಿಆರ್-3/2021-22, ದಿನಾಂಕ: 08-12-2021.

20/12

*==*==*

2021-22ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಎಚ್.ಡಿ. ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಹೊಸ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ನೀಡಲು ಅರ್ಹ ವಿದ್ಯಾರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಕುರಿತು ಈ ಪತ್ರದೊಂದಿಗೆ ಲಗತ್ತಿಸಿರುವ ಪ್ರಕಟಣೆಯನ್ನು ಸಾರ್ವಜನಿಕರ ಗಮನಕ್ಕಾಗಿ ತಮ್ಮ ಕಛೇರಿಯ ಸೂಚನಾಫಲಕಗಳಲ್ಲಿ ಪ್ರಕಟಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದೆ.

ತಮ್ಮ ವಿಶ್ವಾಸಿ,

ಜಿಲ್ಲಾ ಅಧಿಕಾರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ಅಡಕ: 1

**ಪ್ರತಿಯನ್ನು:-**

1) ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಕಛೇರಿ ಕಡತಕ್ಕೆ.

→ E4 / E1

ಕರ್ನಾಟಕ ಸರ್ಕಾರ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ,

ಬೆಂಗಳೂರು-560 052,

## ಪ್ರಕಟಣೆ

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-3/2021-22 ದಿನಾಂಕ:08.12.2021.

**ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗಾಗಿ ಅರ್ಜಿ ಆಹ್ವಾನ**

2021-22ನೇ ಸಾಲಿನಲ್ಲಿ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ) ಹಾಗೂ III(ಬಿ) ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/- ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ. 2021-22ನೇ ಸಾಲಿನಲ್ಲಿ ಪ್ರಥಮ ವರ್ಷದಲ್ಲಿ ಅಭ್ಯಾಸಿಸುತ್ತಿರುವ ಹೊಸ ವಿದ್ಯಾರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಹತೆ ಮತ್ತು ಸೂಚನೆಗಳು:

ಅ) ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

ಆ) ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ) ಹಾಗೂ III(ಬಿ) ಸೇರಿರಬೇಕು.

ಇ) ವಿದ್ಯಾರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ -

- ವ್ಯಾಸಂಗ ವೇತನ/ಫೆಲೋಶಿಪ್ ಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ನಿಗದಿ ಪಡಿಸಿರುವ ವಾರ್ಷಿಕ ಆದಾಯ ಮಿತಿ:-

| ಕ್ರ.ಸಂ | ಪ್ರವರ್ಗ | ಆದಾಯ ಮಿತಿ (ರೂ.ಗಳಲ್ಲಿ) |
|---|---|---|
| 1 | I | 4.50 ಲಕ್ಷ |
| 2 | II(ಎ), III(ಎ) ಹಾಗೂ III(ಬಿ) | 3.50 ಲಕ್ಷ |

ಈ) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.

ಉ) ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಗಳಲ್ಲಿನ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.

ಊ) On-line ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:30.12.2021 ಸಂಜೆ 5.30.

ಋ) ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್ ಸೈಟ್ **https://www.bcwd.karnataka.gov.in** ಅನ್ನು ನೋಡಬಹುದು.

ಸಹಾಯವಾಣಿ ಸಂಖ್ಯೆ: **8050770004** (ಕಛೇರಿಯ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ **10.00** ರಿಂದ ಸಂಜೆ **05.30** ರವರೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಬೆಂಗಳೂರು.

No. NITK/Academic/2021-22/E4 Date: 23.12.2021

To,

The Chairman CCC kindly arrange to upload in the Institute Website for the information of the respective students.

Assistant Registrar (Academic)
National Institute of Technology
Karnataka, Surathkal
P.O.Srinivasnagar, Mangalore-575025

Asst. Registrar (Academic) I/C